# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಾರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ:23ನೇ ಮಾರ್ಚ್, 2022**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

***

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೆರಡನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:**

| | |
|---|---|
| 17ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಎನ್.ರವಿಕುಮಾರ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 251 (1930) | ಮಾನ್ಯ ಮುಜರಾಯಿ, ಹಜ್ ಮತ್ತು ವಕ್ಫ್ ಸಚಿವರು |
| 17ನೇ ಪಟ್ಟಿಯಿಂದ ತಡೆಹಿಡಿಯಲಾದ **ಡಾ. ಕೆ. ಗೋವಿಂದರಾಜು** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 252 (2004) | ಮಾನ್ಯ ಪಶುಸಂಗೋಪನೆ ಸಚಿವರು |
| 18ನೇ ಪಟ್ಟಿಯಿಂದ ತಡೆಹಿಡಿಯಲಾದ **ಡಾ. ಚಂದ್ರಶೇಖರ್ ಬ. ಪಾಟೀಲ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 258 (2056) | ಮಾನ್ಯ ಕಂದಾಯ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೆರಡನೆಯ ಪಟ್ಟಿ

## 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಅ) **ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು)** ಅವರು:-

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ **ರಾಜ್ಯ ಸರ್ಕಾರದ ಹಣಕಾಸಿನ ವ್ಯವಹಾರಗಳ** ಮೇಲಿನ 31ನೇ ಮಾರ್ಚ್, 2021ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ವರದಿಯನ್ನು (2022ನೇ ವರ್ಷದ ವರದಿ ಸಂಖ್ಯೆ-1) ಸಭೆಯ ಮುಂದಿಡುವುದು.

ಆ) ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೂರನೇ ಮತ್ತು ನಾಲ್ಕನೇ ಪಟ್ಟಿಯ ರೀತ್ಯಾ.

ಇ) **ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.**

01. ಕರ್ನಾಟಕ ಬಂದೀಖಾನೆಗಳ (ತಿದ್ದುಪಡಿ) ವಿಧೇಯಕ, 2022

02. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕ, 2022

..2..

## 03. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01. ಕರ್ನಾಟಕ ಬಂದೀಖಾನೆಗಳ (ತಿದ್ದುಪಡಿ) ವಿಧೇಯಕ, 2022

**ಶ್ರೀ ಆರಗ ಜ್ಞಾನೇಂದ್ರ (ಮಾನ್ಯ ಗೃಹ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ಬಂದೀಖಾನೆಗಳ (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು;

02. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕ, 2022

**ಶ್ರೀ ಮುರುಗೇಶ್ ಆರ್. ನಿರಾಣಿ (ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು;

## 04. ಇಲಾಖಾ ನೀತಿ ಹಾಗೂ ಕಾರ್ಯಚರಣೆ ಮೇಲಿನ ಚರ್ಚೆ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ನೀತಿ ಹಾಗೂ ಕಾರ್ಯಚರಣೆಯ ಮೇಲಿನ ಚರ್ಚೆ

## 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಮುನಿರಾಜು ಗೌಡ ಪಿ.ಎಂ.** ಅವರು ಬೆಂಗಳೂರು ದಕ್ಷಿಣ ತಾಲ್ಲೂಕಿನ ಕೆಂಬತ್ತಳ್ಳಿ ಸರ್ವೆ ನಂ.85 ನೆಲ್ಲೂ ರೆಡ್ಡಿ ಕ್ವಾರಿ ಪ್ರದೇಶದಲ್ಲಿ ಅನಧಿಕೃತ ಜೈವಿಕ ತ್ಯಾಜ್ಯದ ವಿಲೇವಾರಿಯಿಂದ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಾಸಿಸುತ್ತಿರುವ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

02. **ಶ್ರೀ ಮರಿತಿಬ್ಬೇಗೌಡ** ಅವರು ಮಂಡ್ಯ ವೈದ್ಯಕೀಯ ವಿಜ್ಞಾನ ಶಿಕ್ಷಣ ಸಂಸ್ಥೆಯಲ್ಲಿ ಅಸೋಸಿಯೇಟ್ ಪ್ರೊಫೆಸರ್‌ಗಳಿಗೆ ನಿವೃತ್ತಿ ವೇತನವನ್ನು ಮಂಜೂರು ಮಾಡುವ ಕುರಿತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

03. **ಡಾ. ವೈ.ಎ. ನಾರಾಯಣಸ್ವಾಮಿ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು** ಅವರು ಖಾಸಗಿ ಅನುದಾನ ರಹಿತ ಶಾಲಾ ಶಿಕ್ಷಕರಿಗೆ Teacher's Benefit Fund ನಿಂದ ಯಾವುದೇ ನೆರವು ಸಿಗುತ್ತಿಲ್ಲದಿರುವ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

04. **ಡಾ: ಕೆ. ಗೋವಿಂದರಾಜ್** ಅವರು ಬೆಂಗಳೂರು ನಗರದಲ್ಲಿ ದುರ್ಬಲಗೊಂಡಿರುವ Flyover ಗಳನ್ನು ಸರಿಪಡಿಸುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

..3..

## 06. ನಿಯಮ 330ರ ಮೇರೆಗೆ

01. **ಶ್ರೀಯುತರುಗಳಾದ ಎನ್.ರವಿಕುಮಾರ್, ಯು.ಬಿ.ವೆಂಕಟೇಶ್, ದಿನೇಶ್ ಗೂಳಿಗೌಡ ಹಾಗೂ ಡಿ.ಎಸ್. ಅರುಣ್** ಅವರುಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಲ್ಲಿ ನಡೆಯುತ್ತಿರುವ ಅಕ್ರಮಗಳ ಕುರಿತು ಪ್ರಸ್ತಾಪಿಸುವುದು.

02. **ಶ್ರೀಯುತರುಗಳಾದ ಕೆ.ಎ. ತಿಪ್ಪೇಸ್ವಾಮಿ, ಕೆ.ಟಿ. ಶ್ರೀಕಂಠೇಗೌಡ, ಗೋವಿಂದರಾಜು, ಎಸ್.ಎಲ್. ಭೋಜೇಗೌಡ ಹಾಗೂ ಸೂರಜ್ ರೇವಣ್ಣ** ಅವರುಗಳು ಕರ್ನಾಟಕ ನಾಗರೀಕ ಸೇವಾ ನಿಯಮ 2021ಕ್ಕೆ ತಿದ್ದುಪಡಿ ತರಲು ಸರ್ಕಾರವು ಕರ್ನಾಟಕ ಲೋಕಸೇವಾ ಆಯೋಗದೊಂದಿಗೆ ಸಮಾಲೋಚಿಸದೇ ಕರಡು ಅಧಿಸೂಚನೆಯನ್ನು ಹೊರಡಿಸಿರುವುದರ ಕುರಿತು ಪ್ರಸ್ತಾಪಿಸುವುದು.

03. **ಶ್ರೀಯುತರುಗಳಾದ ಹೆಚ್.ಎಂ. ರಮೇಶ್‌ಗೌಡ, ನಸೀರ್ ಅಹ್ಮದ್, ಎನ್. ರವಿಕುಮಾರ್, ಎಂ.ಎಲ್. ಅನಿಲ್ ಕುಮಾರ್, ಹೆಚ್.ಎಸ್. ಗೋಪಿನಾಥ್** ಹಾಗೂ ಇತರರು ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ತಾಲ್ಲೂಕು, ಕುಂದಾಣ ಹೋಬಳಿಯಲ್ಲಿನ ಸರ್ಕಾರಿ ಗೋಮಾಳ ಸ್ವತ್ತನ್ನು ಸುಳ್ಳು ದಾಖಲಾತಿ ಸೃಷ್ಟಿಸಿ ಅಕ್ರಮವಾಗಿ ಖಾತೆ ವರ್ಗಾಯಿಸಿಕೊಂಡಿರುವ ಕುರಿತು ಪ್ರಸ್ತಾಪಿಸುವುದು.

04. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ನಸೀರ್ ಅಹ್ಮದ್, ಪಿ.ಆರ್. ರಮೇಶ್, ಎಸ್. ರವಿ, ಸಲೀಂ ಅಹಮದ್** ಹಾಗೂ ಇತರರು ಬೆಂಗಳೂರಿನ ಟರ್ಫ್ ಕ್ಲಬ್ ಸಂಸ್ಥೆಯು ಸರ್ಕಾರಕ್ಕೆ ಪಾವತಿಸಬೇಕಾಗಿರುವ ತೆರಿಗೆ ಹಾಗೂ ಬಾಡಿಗೆ ಮೊತ್ತವನ್ನು ಬಾಕಿ ಉಳಿಸಿಕೊಂಡಿರುವುದರಿಂದ ಸದರಿ ಕ್ಲಬ್‌ನ ಪರವಾನಗಿಯನ್ನು ರದ್ದುಪಡಿಸುವ ಕುರಿತು ಪ್ರಸ್ತಾಪಿಸುವುದು.

## 07. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | | |
|---|---|---|
| 1. | ಶ್ರೀ ಕೆ. ಎ. ತಿಪ್ಪೇಸ್ವಾಮಿ,<br>ಶ್ರೀ ಕೆ.ಟಿ.ಶ್ರೀಕಂಠೇಗೌಡ ಮತ್ತು<br>ಶ್ರೀ ಎಸ್.ಎಲ್ ಭೋಜೇಗೌಡ ಅವರುಗಳು | ಬಿಎಂಆರ್‌ಸಿಎಲ್‌ಗೆ ಭೂಸ್ವಾಧೀನ ಪ್ರಕ್ರಿಯೆಯಲ್ಲಿರುವ ಜಮೀನುಗಳನ್ನು ನಂದಿ ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಎಂಟರ್‌ಪ್ರೈಸಸ್ ಸಂಸ್ಥೆಗೆ ಸೇರಿದ ಭೂಮಿಯನ್ನು ಕೆ.ಐ.ಎ.ಡಿ.ಬಿ. ವತಿಯಿಂದ ಪಡೆದಿರುವ ಕುರಿತು ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ. |
| 2. | ಶ್ರೀ ಬಿ.ಕೆ. ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಶ್ರೀ ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಶ್ರೀ ಅಲ್ಲಂ ವೀರಭದ್ರಪ್ಪ, ಶ್ರೀ ಆರ್.ಬಿ.ತಿಮ್ಮಾಪೂರ, ಶ್ರೀ ಸಲೀಂ ಅಹಮದ್, ಶ್ರೀ ಎಸ್.ರವಿ, ಶ್ರೀ ಯು.ಬಿ. ವೆಂಕಟೇಶ್ ಹಾಗೂ ಶ್ರೀಮತಿ ವೀಣಾ ಅಚ್ಚಯ್ಯ ಅವರುಗಳು | ರಾಜ್ಯದ ಕಾನೂನು ಹಾಗೂ ಸಮಾಜ ರಕ್ಷಕರಾಗಿರುವ ಕೆಲವು ಪೊಲೀಸರು ಹಣ ಸಂಪಾದನೆಗಾಗಿ ಭ್ರಷ್ಟಾಚಾರದಲ್ಲಿ ತೊಡಗಿರುವ ಕುರಿತು. |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**